ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 17 ನೇ ಮಾರ್ಚ್, 2020

ಹಟ್ಟಿ ಚಿನ್ನದ ಗಣಿಯ ಕುರಿತು

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

1054 (1275) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಹಟ್ಟಿ ಚಿನ್ನದ ಗಣಿಯ ಉತ್ಪಾದನೆಯು ಕುಂಠಿತವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಸರ್ಕಾರಿ ಸ್ವಾಮ್ಯದಲ್ಲಿರುವ ಹಟ್ಟಿ ಚಿನ್ನದ ಗಣಿಯನ್ನು ಯಾವಾಗ ಆರಂಭಿಸಲಾಯಿತು ;

(ಇ) ಸದರಿ ಚಿನ್ನದ ಗಣಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾರ್ಮಿಕರು ಹಾಗೂ ಆಡಳಿತ ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ವೃಂದಾವಾರು ಮಾಹಿತಿ ತಿಳಿಸುವುದು)

(ಈ) ಕಳೆದ ಮೂರು ವರ್ಷಗಳ ಅವಧಿಯಲ್ಲಿ ಉತ್ಪಾದಿಸಲಾದ ಚಿನ್ನದ ಪ್ರಮಾಣ ಎಷ್ಟು ;

(ಉ) ಪ್ರತಿ ವರ್ಷ ಚಿನ್ನದ ಉತ್ಪಾದನೆಗಾಗಿ ಮಾಡುವ ಒಟ್ಟು ವೆಚ್ಚವೆಷ್ಟು;

(ಊ) ರಾಜ್ಯದ ಇತರೆ ಭಾಗಗಳಲ್ಲಿ ಚಿನ್ನದ ನಿಕ್ಷೇಪ ಇರುವುದು ವರದಿಯಾಗಿದ್ದು, ಇದು ನಿಜವಾಗಿದ್ದರೆ ಚಿನ್ನದ ಉತ್ಪಾದನೆಗಾಗಿ ಸರ್ಕಾರ ಯೋಜನೆ ಹಾಕಿಕೊಂಡಿದೆಯೇ ?